ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮೀಸಲಾತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 10/2/2020

# ಮೀಸಲಾತಿ ತೀರ್ಪಿಗೆ ಅಸಮಾಧಾನದ ಹೊಗೆ

ನವದೆಹಲಿ: 'ಸರ್ಕಾರಿ ಉದ್ಯೋಗಗಳಲ್ಲಿ ಹಾಗೂ ಬಡ್ತಿಗಳಲ್ಲಿ ಮೀಸಲಾತಿ ಕೋರುವುದು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸಮುದಾಯಗಳ ಮೂಲಭೂತ ಹಕ್ಕಲ್ಲ' ಎಂದು ಸುಪ್ರೀಂ ನೀಡಿರುವ ತೀರ್ಪಿನ ಬಗ್ಗೆ ರಾಜಕೀಯ ವಲಯದಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗಿದೆ. ಪ್ರಮುಖ ವಿರೋಧ ಪಕ್ಷವಾದ ಕಾಂಗ್ರೆಸ್ ಮಾತ್ರ ವಲ್ಲದೆ ಬಿಜೆಪಿ ಮಿತ್ರಪಕ್ಷ ಲೋಕಜನ ಶಕ್ತಿ ಪಾರ್ಟಿ ಕೂಡ ತೀರ್ಪಿನ ಬಗ್ಗೆ ಬೇಸರ ವ್ಯಕ್ತಪಡಿಸಿದೆ. ಎನ್‌ಡಿಎ ಒಳಗೆ ಅಸಮಾಧಾನದ ಬೇಗುದಿ ಏಳಲು ಕಾರಣವಾಗುವ ಭೀತಿ ಆವರಿಸಿದೆ.

ತೀರ್ಪಿನ ಹಿನ್ನೆಲೆಯಲ್ಲಿ ಉತ್ತರಾಖಂಡದಲ್ಲಿನ ಬಿಜೆಪಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿರುವ ಕಾಂಗ್ರೆಸ್, 'ಉತ್ತರಾಖಂಡ ಸರ್ಕಾರ ನೇಮಿಸಿದ್ದ ವಕೀಲರು ಮೀಸಲಾತಿ ಬಗ್ಗೆ ಸುಪ್ರೀಂ ಕೋರ್ಟ್‌ನಲ್ಲಿ ಸಮರ್ಥವಾಗಿ ವಾದ ಮಂಡಿಸದೇ ಇದ್ದುದೇ ಈ ರೀತಿಯ ತೀರ್ಪು ಬರಲು ಕಾರಣ. ಸರ್ಕಾರದ ಈ ಬೇಜವಾಬ್ದಾರಿ ನಡೆ ಪರಿಶಿಷ್ಟರ ಬಗ್ಗೆ ಆ ಪಕ್ಷ ಹೊಂದಿರುವ ಬದ್ಧತೆಯನ್ನು ಪ್ರಶ್ನಿಸುವಂತಿದೆ' ಎಂದು ಆಕ್ಷೇಪಿಸಿದೆ.

ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುಕುಲ್ ವಾಸ್ನಿಕ್, ಮೀಸಲಾತಿ ಕುರಿತ

- ಕಾಂಗ್ರೆಸ್ ಮಾತ್ರವಲ್ಲ, ಎನ್‌ಡಿಎ ಮಿತ್ರಪಕ್ಷದಿಂದಲೂ ಅತೃಪ್ತಿ
- ಸುಪ್ರೀಂ ಕೋರ್ಟ್ ನೀಡಿರುವ ಇತ್ತೀಚಿನ ತೀರ್ಪು ತಂದ ಬೇಗುದಿ

ಸುಪ್ರೀಂ ಕೋರ್ಟ್ ತೀರ್ಪನ್ನು ನಾವು ಒಪ್ಪುವುದಿಲ್ಲ, ಬಿಜೆಪಿ ಆಡಳಿತಾವಧಿಯಲ್ಲಿ ಎಸ್‌ಸಿ/ಎಸ್‌ಟಿ ಸಮುದಾಯಗಳ ಹಕ್ಕುಗಳೇ ಅಪಾಯದಲ್ಲಿವೆ. ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ನಾವು ಹೊಂದಿರುವ ಅಸಮಾಧಾನವನ್ನು ಸಂಸತ್ತಿನ ಒಳಗೆ ಮತ್ತು ಹೊರಗೆ ಗೌರವಯುತವಾಗಿ ಪ್ರದರ್ಶಿಸಲಿದ್ದೇವೆ ಎಂದಿದ್ದಾರೆ.

**ಎಲ್‌ಜೆಪಿ ಅಸಮಾಧಾನ:** ತೀರ್ಪಿನ ಬಗ್ಗೆ ಲೋಕ ಜನಶಕ್ತಿ ಪಾರ್ಟಿ (ಎಲ್‌ಜೆಪಿ) ಪ್ರತಿಕ್ರಿಯೆ ನೀಡಿದ್ದು, ಸುಪ್ರೀಂ ಕೋರ್ಟ್ ತೀರ್ಪು ಪರಿಶಿಷ್ಟ ಸಮುದಾಯವನ್ನು ಬಾಧಿಸದಿರುವಂತೆ ಕೇಂದ್ರ ಸರ್ಕಾರ ತುರ್ತಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದೆ. ಇದು ಸಾಲದೆಂಬಂತೆ, ಕೇಂದ್ರ ಸಚಿವ ಹಾಗೂ ದಲಿತ ನಾಯಕ ರಾಮ್‌ವಿಲಾಸ್ ಪಾಸ್ವಾನ್, ಸೋಮವಾರದಂದು ಎಸ್ಸಿ, ಎಸ್ಟಿ ಸಂಸದರನ್ನು ಒಗ್ಗೂಡಿಸಿ ಸಭೆ ನಡೆಸಿದ್ದಾರೆ. ಇದೂ ಸಹ ಆಡಳಿತಾರೂಢ ಬಿಜೆಪಿಗೆ ಎಚ್ಚರಿಕೆಯ ಕರೆಗಂಟೆಯಾಗಿದೆ ಎಂದು ಹೇಳಲಾಗಿದೆ.